ಇ) ಹಾಗಿದ್ದಲ್ಲಿ, ಈ ಸಂಪರ್ಕ ರಸ್ತೆಯನ್ನು ಯಾವಾಗ ಉನ್ನತೀಕರಿಸಲಾಗುವುದು?

ಶ್ರೀ ಸಿ.ಎಂ.ಉದಾಸಿ (ಲೋಕೋಪಯೋಗಿ ಸಚಿವರು) :

ಅ) 2009–10ನೇ ಸಾಲಿನಲ್ಲಿ ಶಿವಮೊಗ್ಗ ತಾಲ್ಲೂಕು, ಹೊಳಲೂರು ಬಳಿ ತುಂಗಭದ್ರಾ ನದಿಗೆ ರೂ. 2745.00 ಲಕ್ಷಗಳ ಅಂದಾಜು ಮೊತ್ತದಲ್ಲಿ ಕಾಮಗಾರಿಯನ್ನು ಅನುದಾನದ ಲಭ್ಯತೆ ಮೇರೆಗೆ ತೆಗೆದುಕೊಳ್ಳುವ ಬಗ್ಗೆ ಪರಿಶೀಲನೆಯಲ್ಲಿದೆ.

ಆ) ಸದರಿ ಗ್ರಾಮೀಣ ಸಂಪರ್ಕ ರಸ್ತೆಯನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

ಇ) ಉದ್ಭವಿಸುವುದಿಲ್ಲ.

872 ಶ್ರೀ ಲಾಲಾಜಿ ಆರ್.ಮೆಂಡನ್ (ಕಾಪು) : ಮೀನುಗಾರಿಕೆ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೀನುಗಾರಿಕಾ ಇಲಾಖೆಯಿಂದ ಮೀನುಗಾರರ ಮಹಿಳೆಯವರಿಗೆ ವ್ಯಾಪಾರಕ್ಕಾಗಿ ಮಾರುಕಟ್ಟೆ ಹಾಗೂ ಮೂಲಭೂತ ಸೌಲಭ್ಯಕ್ಕಾಗಿ ಎಷ್ಟು ಹೊಸ ಮಾರುಕಟ್ಟೆ ನಿರ್ಮಾಣದ ಯೋಜನೆ ರೂಪಿಸಲಾಗಿದೆ;

ಆ) ಕಾಪು ಕ್ಷೇತ್ರದಲ್ಲಿ ಎಷ್ಟು ಕಡೆ ಇಂತಹ ಸೌಲಭ್ಯ ಒದಗಿಸಲಾಗುವುದು;

ಇ) ಮೀನುಗಾರರ ಮಹಿಳೆಯರಿಗೆ ವಾಹನದಲ್ಲಿ ಚಲಿಸುವಾಗ ಕಡ್ಡಾಯ ಜೀವ ವಿಮಾ ಸೌಲಭ್ಯ ಒದಗಿಸಲಾಗುವುದೇ?

ಶ್ರೀ ಆನಂದ ವಸಂತ ಅಸ್ನೋಟಿಕರ (ಮೀನುಗಾರಿಕೆ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು) :

ಅ) 2009–10ನೇ ಸಾಲಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಗೆ ರೂ.2.64 ಲಕ್ಷ ಅನುದಾನ ಒದಗಿಸಲಾಗಿದ್ದು, 8 ಮಾರುಕಟ್ಟೆಗಳ ನಿರ್ಮಾಣ / ನವೀಕರಣ ಕೈಗೊಳ್ಳುವ ಗುರಿಯನ್ನು ಹೊಂದಲಾಗಿದೆ.

ಆ) ಪ್ರಸ್ತುತ ಸಾಲಿನಲ್ಲಿ ಮೀನು ಮಾರುಕಟ್ಟೆ ನಿರ್ಮಾಣ ಯೋಜನೆಯಡಿ ಉಡುಪಿ ಜಿಲ್ಲೆಗೆ ಯಾವುದೇ ಅನುದಾನ ಒದಗಿಸಿರುವುದಿಲ್ಲವಾದ್ದರಿಂದ ಕಾಪು ಕ್ಷೇತ್ರದಲ್ಲಿ ಈ ಯೋಜನೆಯಡಿ ಮೀನುಗಾರಿಕೆ ಇಲಾಖೆಯಿಂದ ಯಾವುದೇ ಮೀನು ಮಾರುಕಟ್ಟೆಗಳ ನಿರ್ಮಾಣ/ ನವೀಕರಣ ಪ್ರಸ್ತಾಪಿಸಿರುವುದಿಲ್ಲ.

ಇ) ಮೀನುಗಾರಿಕೆ ಇಲಾಖೆಯು ಕೇಂದ್ರ ಪುರಸ್ಕೃತ ಯೋಜನೆಯಾದ "ಮೀನುಗಾರರ ಸಾಮೂಹಿಕ ಅಪಘಾತ ವಿಮಾ ಯೋಜನೆ" ಅಡಿಯಲ್ಲಿ ಮೀನುಗಾರರ ಸಹಕಾರಿ ಸಂಘಗಳಲ್ಲಿ ಸದಸ್ಯರಾಗಿರುವ ಮೀನುಗಾರರು ಮತ್ತು ಮಹಿಳಾ ಮೀನುಗಾರರ/ಕುಟುಂಬದವರಿಗೆ ಮೀನು ಮಾರಾಟ ಸೇರಿದಂತೆ ಮೀನುಗಾರಿಕೆ ಚಟುವಟಿಕೆಯಲ್ಲಿ ತೊಡಗಿರುವಾಗ ಮೃತರಾದಲ್ಲಿ ಅಥವಾ ಅಂಗವಿಕಲರಾದಲ್ಲಿ ವಿಮಾ ಸೌಲಭ್ಯ ಒದಗಿಸಲಾಗುತ್ತಿದೆ. ಆದ್ದರಿಂದ, ಮೀನುಗಾರ ಮಹಿಳೆಯರಿಗೆ ವಾಹನದಲ್ಲಿ ಚಲಿಸುವಾಗ ಪ್ರತ್ಯೇಕ ವಿಮಾ ಸೌಲಭ್ಯ ಒದಗಿಸುವ ಅವಶ್ಯಕತೆ ಬರುವುದಿಲ್ಲ.

95 ಶ್ರೀ ಎಂ.ಟಿ.ಕೃಷ್ಣಪ್ಪ (ತುರುವೇಕೆರೆ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಮಕೂರು ಜಿಲ್ಲೆ ತುರುವೇಕೆರೆ ಕ್ಷೇತ್ರಕ್ಕೆ 2007–08ರಿಂದ ಇಲ್ಲಿಯವರೆಗೆ ಲೆಕ್ಕ ಶೀರ್ಷಿಕೆ 3054ರಲ್ಲಿ ಮಂಜೂರಾದ ಅನುದಾನ ಹಾಗೂ ಬಿಡುಗಡೆಯಾದ ಅನುದಾನವೆಷ್ಟು (ಕಾಮಗಾರಿವಾರು ಮಾಹಿತಿ ನೀಡುವುದು);

ಆ) ಈ ಹಣವನ್ನು ಬಿಡುಗಡೆ ಮಾಡುವಾಗ ಕ್ಷೇತ್ರದಿಂದ ಕ್ಷೇತ್ರಕ್ಕೆ ತಾರತಮ್ಯ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಈ ತಾರತಮ್ಯವನ್ನು ಸರಿಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಈ) ಹಾಗಿದ್ದಲ್ಲಿ, ಈ ತಾರತಮ್ಯಕ್ಕೆ ಕಾರಣಗಳೇನು?

ಶ್ರೀ ಸಿ.ಎಂ.ಉದಾಸಿ (ಲೋಕೋಪಯೋಗಿ ಸಚಿವರು) :

ಅ) ತುಮಕೂರು ಜಿಲ್ಲೆ ತುರುವೇಕೆರೆ ಕ್ಷೇತ್ರಕ್ಕೆ 2007–08ರಿಂದ ಇಲ್ಲಿಯವರೆಗೆ ಲೆಕ್ಕ ಶೀರ್ಷಿಕೆ 3054ರಲ್ಲಿ ಮಂಜೂರಾದ ಅನುದಾನ ಹಾಗೂ ಬಿಡುಗಡೆಯಾದ ಅನುದಾನದ ಕಾಮಗಾರಿವಾರು ಮಾಹಿತಿಯನ್ನು ಅನುಬಂಧ–1 ರಲ್ಲಿ ನೀಡಲಾಗಿದೆ.

ಆ) ವಿವಿಧ ಕ್ಷೇತ್ರಗಳಲ್ಲಿನ ರಸ್ತೆ ಅಭಿವೃದ್ಧಿಗೆ ಆಯಾ ಕ್ಷೇತ್ರದ ರಸ್ತೆ ಉದ್ದ, ರಸ್ತೆ ಸ್ಥಿತಿಗತಿ, ಅಗತ್ಯತೆ ಅವಶ್ಯಕತೆ ಹಾಗೂ ಪ್ರಗತಿಯನ್ನಾಧರಿಸಿ ಆರ್ಥಿಕ ಇಲಾಖೆಯಿಂದ ವಿವಿಧ ಲೆಕ್ಕ ಶೀರ್ಷಿಕೆಗಳಡಿ (Varies Head of A/C) ಬಿಡುಗಡೆಯಾಗುವ ಹಣ:ಅನುದಾನಕ್ಕನುಗುಣವಾಗಿ ವಿಭಾಗಗಳಿಗೆ ಹಣವನ್ನು ಹಂಚಿಕೆ ಮಾಡಲಾಗುತ್ತದೆ. ತಾರತಮ್ಯ ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಅನ್ವಯಿಸುವುದಿಲ್ಲ.